ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಮಂಗಳವಾರ, ದಿನಾಂಕ : 23ನೇ ಜುಲೈ, 2019

ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಬೋಧಕರ ಕೊರತೆ ಬಗ್ಗೆ

ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ):-

498 (489) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರವು ಇಲ್ಲಿಯವರೆಗೆ ಪ್ರಾರಂಭಿಸಿರುವ ಕರ್ನಾಟಕ ಪಬ್ಲಿಕ್ ಶಾಲೆಗಳ ಸಂಖ್ಯೆ ಎಷ್ಟು;

(ಆ) ಯಾವ ಯಾವ ಸ್ಥಳಗಳಲ್ಲಿ ಈ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸಲಾಗಿದೆ;

(ಇ) ಎಷ್ಟು ಕರ್ನಾಟಕ ಪಬ್ಲಿಕ್ ಶಾಲೆಗಳು ಒಂದೇ ಆವರಣದಲ್ಲಿ ನಡೆಯುತ್ತಿವೆ;

(ಈ) ಬೇರೆ ಬೇರೆಯಾಗಿ ಕೆಲಸ ನಿರ್ವಹಿಸುತ್ತಿರುವ ಪ್ರಾಚಾರ್ಯರು ಮತ್ತು ಶಿಕ್ಷಕರು ಒಂದೇ ಅಡಿಯಲ್ಲಿ ಬರಲು ಕೈಗೊಂಡಿರುವ ಕ್ರಮಗಳೇನು;

(ಉ) ಈ ಶಾಲೆಗಳಲ್ಲಿ ಬೋಧಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಬಂದಿದ್ದಲ್ಲಿ, ಖಾಲಿ ಇರುವ ಎಲ್ಲಾ ಬೋಧಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?